ಉ) ಹಾಗಿದ್ದಲ್ಲಿ ಈ ತೊಂದರೆಯನ್ನು ಹೋಗಲಾಡಿಸಲು ಹಾಗೂ ಉಪನ್ಯಾಸಕರನ್ನು ನೇಮಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು):-

ಅ) ಬಂದಿದೆ.

ಆ) ಒಬ್ಬ ಪೂರ್ಣಕಾಲಿಕ ಉಪನ್ಯಾಸಕರ ಸ್ಥಾನದಲ್ಲಿ ಇಬ್ಬರು ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿ ವಿದ್ಯಾರ್ಥಿಗಳ ಪಾಠ ಪ್ರವಚನಕ್ಕೆ ತೊಂದರೆಯಾಗದಂತೆ ಗಮನ ವಹಿಸಲಾಗಿದೆ.

ಇ) ಸದರಿ ಕಾಲೇಜಿನಲ್ಲಿ ಗುತ್ತಿಗೆ ಆಧಾರದ ಮೇಲೆ ಉಪನ್ಯಾಸಕರನ್ನು ನೇಮಿಸಿಲ್ಲ. ಅರೆಕಾಲಿಕ ಉಪನ್ಯಾಸಕರಿಗೆ ಮಾಸಿಕ 600 ರೂಪಾಯಿಗಳ ಅಂಶಕಾಲಿಕ ಭತ್ಯೆ ನೀಡಲಾಗುತ್ತಿದೆ.

ಈ) ಪ್ರಶ್ನೆ (ಅ)ದಲ್ಲಿನ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಈ ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದ್ದು ಈ ದಿಶೆಯಲ್ಲಿ ತ್ವರಿತ ಕ್ರಮ ಕೈಗೊಳ್ಳಲಾಗುವುದು.

ವಿಶ್ವವಿದ್ಯಾನಿಲಯಗಳ ಪರೀಕ್ಷಾ ಪದ್ಧತಿಯಲ್ಲಿ ಲೋಪದೋಷಗಳು

309 (937) ಪಿ.ಜಿ.ಆರ್. ಸಿಂಧ್ಯ (ಕನಕಪುರ):-

ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

1. ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳ ಪರೀಕ್ಷಾ ಪದ್ಧತಿಯಲ್ಲಿ ಲೋಪ ದೋಷಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2. ಕಳೆದ ಎರಡು ವರ್ಷಗಳಲ್ಲಿ ಈ ಲೋಪದೋಷಗಳ ಬಗ್ಗೆ ವಿಚಾರಣೆ ನಡೆದಿದೆಯೇ;

3. ನಡೆದಿದ್ದಲ್ಲಿ ಇವುಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು;

4. ಈಗಿರುವ ಪರೀಕ್ಷಾ ಪದ್ಧತಿಯನ್ನು ಬದಲಾವಣೆ ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ ?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು):-

1. ಇಲ್ಲ.

2. ಉದ್ಭವಿಸುವುದಿಲ್ಲ.

3. ಉದ್ಭವಿಸುವುದಿಲ್ಲ.

4. ಇಲ್ಲ.

ವಯಸ್ಕರ ಶಿಕ್ಷಣ ಇಲಾಖೆಯ ಸಿಬ್ಬಂದಿಯ ಸಂಖ್ಯೆ

310 (938) ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ):-

ವಯಸ್ಕರ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?